# Akashvani : Bangalore
# Regional Bulletin In Kannada
# 20.01.2026 / 14.30  hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಅನೈತಿಕ ನಡವಳಿಕೆ ಆರೋಪ; ಡಿಜಿಪಿ ರಾಮಚಂದ್ರ ರಾವ್ ಅಮಾನತುಗೊಳಿಸಿ ಸರ್ಕಾರ ಆದೇಶ**

**೨. ಆಯವ್ಯಯ ಮಂಡನೆ ಹಿನ್ನೆಲೆ; ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಪೂರ್ವಭಾವಿ ಸಭೆ**

**೩. ಶಬರಿಮಲೆ ಚಿನ್ನಕಳವು ಪ್ರಕರಣ; ಬಳ್ಳಾರಿ, ಬೆಂಗಳೂರಿನಲ್ಲಿ ಇಡಿ ಅಧಿಕಾರಿಗಳಿಂದ ಶೋಧ**

**೪. ಅಬಕಾರಿ ಇಲಾಖೆಯಲ್ಲಿ ೨ ಸಾವಿರದ ೫೦೦ ಕೋಟಿ ರೂಪಾಯಿ ಹಗರಣ; ಸಚಿವರ ರಾಜೀನಾಮೆಗೆ ಬಿಜೆಪಿ ಆಗ್ರಹ**

**೫. ಲಕ್ಕುಂಡಿಯಲ್ಲಿ ಮುಂದುವರಿದ ಉತ್ಖನನ ಕಾರ್ಯ; ಇಂದು ಲೋಹದ ಘಂಟೆ ಪತ್ತೆ**

**<><*<><>*><>**

ಡಿಜಿಪಿ ರಾಮಚಂದ್ರರಾವ್ ವಿರುದ್ಧ ಕೇಳಿಬಂದಿರುವ ಗಂಭೀರ ಅನೈತಿಕ ನಡವಳಿಕೆ ಆರೋಪದ ಹಿನ್ನೆಲೆಯಲ್ಲಿ ಸರ್ಕಾರ ಅವರನ್ನು ಅಮಾನತುಗೊಳಿಸಿ ಆದೇಶ ನೀಡಿದೆ. ರಾಮಚಂದ್ರರಾವ್ ಅವರದ್ದು ಎನ್ನಲಾದ ಆಕ್ಷೇಪಾರ್ಹ ದೃಶ್ಯಾವಳಿಗಳು ಬಹಿರಂಗೊಂಡ ಹಿನ್ನೆಲೆಯಲ್ಲಿ ಸರ್ಕಾರ ಅವರನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಅವರ ವೀಡಿಯೋ ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಈ ಹಿನ್ನೆಲೆಯಲ್ಲಿ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ ರಾಜ್ಯ ಸರ್ಕಾರ, ಪ್ರಾಥಮಿಕ ವಿಚಾರಣೆ ನಡೆಸಿದೆ. ನಾಗರಿಕ ಸೇವಾ ನಿಯಮಗಳ ಉಲ್ಲಂಘನೆ ಮತ್ತು ಇಲಾಖೆಯ ಶಿಸ್ತಿಗೆ ಚ್ಯುತಿ ತಂದಿರುವ ಹಿನ್ನೆಲೆಯಲ್ಲಿ ರಾಮಚಂದ್ರರಾವ್ ಅವರನ್ನು ತಕ್ಷಣ ಅಮಾನತುಗೊಳಿಸುವಂತೆ ಸರ್ಕಾರ ಆದೇಶ ಹೊರಡಿಸಿದೆ. ತನಿಖೆ ಪೂರ್ಣಗೊಳ್ಳುವವರೆಗೆ ಯಾವುದೇ ಅಧಿಕೃತ ಹುದ್ದೆಯಲ್ಲಿ ಮುಂದುವರಿಯುವಂತಿಲ್ಲ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.

**<><*<><>*><>**

ಡಿಜಿಪಿ ರಾಮಚಂದ್ರ ರಾವ್ ಅವರ ವಿರುದ್ಧದ ಆರೋಪ ಸಾಬೀತಾದರೆ, ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಚ್ಚರಿಕೆ ನೀಡಿದ್ದಾರೆ ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂತಹ ಪ್ರಕರಣವನ್ನು ಸಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಯಾವುದೇ ಇಲಾಖೆಯಲ್ಲಿ ಇಂತಹ ಘಟನೆಗಳು ನಡೆಯಲು ಬಿಡಬಾರದು ಎಂದು ತಿಳಿಸಿದ್ದಾರೆ. ಈ ಘಟನೆಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಸಮಾಧಾನಗೊಂಡಿದ್ದಾರೆ. ಅಧಿಕಾರಿಯನ್ನು ತಕ್ಷಣವೇ ಅಮಾನತುಗೊಳಿಸಿ, ತನಿಖೆ ನಡೆಸಲು ಸೂಚನೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

೨೦೨೬-೨೭ನೇ ಸಾಲಿನ ಆಯವ್ಯಯ ಮಂಡನೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಲಿದ್ದಾರೆ. ಸಭೆಯಲ್ಲಿ ಅವರು, ರಾಜ್ಯದ ಆರ್ಥಿಕ ಸ್ಥಿತಿಗತಿ, ತೆರಿಗೆ ಸಂಪನ್ಮೂಲ ಸಂಗ್ರಹಣೆ ಸೇರಿದಂತೆ ವಿವಿಧ ಅಂಶಗಳ ಬಗ್ಗೆ, ಅಧಿಕಾರಿಗಳಿಂದ ಮಾಹಿತಿ ಪಡೆದುಕೊಳ್ಳಲಿದ್ದಾರೆ. ಆರ್ಥಿಕ ಇಲಾಖೆಯ ಸಭೆಯ ನಂತರ, ಮುಂದಿನ ದಿನಗಳಲ್ಲಿ ಅವರು, ಇಲಾಖಾವಾರು ಸಭೆಗಳನ್ನು ನಡೆಸಿ, ಸಮಾಲೋಚನೆ ನಡೆಸಲಿದ್ದಾರೆ.

**<><*<><>*><>**

ಶಬರಿಮಲೆ ಚಿನ್ನಕಳವು ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇಂದು ರಾಜ್ಯದ ಬೆಂಗಳೂರು, ಬಳ್ಳಾರಿ ಮತ್ತು ಕೇರಳದ ತಿರುವನಂತಪುರ ಸೇರಿದಂತೆ ವಿವಿಧೆಡೆ ದಾಳಿ ನಡೆಸಿದೆ. ಜಾರಿ ನಿರ್ದೇಶನಾಲಯ ಅಧಿಕಾರಿಗಳು ಪ್ರಕಣದ ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿಗೆ ಸೇರಿದ ಮನೆ ಹಾಗೂ

ಕಚೇರಿಗಳ ಮೇಲೆ ದಾಳಿ ನಡೆಸಿದ್ದಾರೆ. ಬಳ್ಳಾರಿಯ ರೊದ್ದಂ ಆಭರಣ ಅಂಗಡಿ ಮಾಲಿಕ ಗೋವರ್ಧನ್ ನಿವಾಸದ ಮೇಲೆ ದಾಳಿ ನಡೆಸಿರುವ ಅಧಿಕಾರಿಗಳ ತಂಡ ಶೋಧ ನಡೆಸುತ್ತಿದೆ. ಬೆಂಗಳೂರಿನ ಶ್ರೀರಾಮ್‌ಪುರದ ಅಯ್ಯಪ್ಪಸ್ವಾಮಿ ದೇವಾಲಯದಲ್ಲಿ ಇಡಿ ಅಧಿಕಾರಿಗಳು ಶೋಧ ನಡೆಸುತ್ತಿದ್ದಾರೆ. ಬಳ್ಳಾರಿಯ ಚಿನ್ನದ ವ್ಯಾಪಾರಿ ಗೋವರ್ಧನ್ ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿ ಅವರಿಂದ ಚಿನ್ನ ಖರೀದಿಸಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದೆ.

<><*<><>*><>

ಅಬಕಾರಿ ಇಲಾಖೆಯಲ್ಲಿ ೨ ಸಾವಿರದ ೫೦೦ ಕೋಟಿ ರೂಪಾಯಿ ಹಗರಣ ನಡೆದಿದ್ದು, ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆಗೆ ಬಿಜೆಪಿ ಆಗ್ರಹಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ ಅಧಿಕಾರಿಗಳ ವರ್ಗಾವಣೆಯಿಂದ ಹಿಡಿದು, ಮದ್ಯದಂಗಡಿಗಳ ಲೈಸೆನ್ಸ್ ಮಂಜೂರಾತಿಯವರೆಗೆ ಪ್ರತಿಯೊಂದಕ್ಕೂ ಲಂಚ ಪಡೆಯಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ಈ ಕುರಿತು ರಾಜ್ಯ ಮದ್ಯ ಮಾರಾಟಗಾರರ ಸಂಘವೇ ಲಿಖಿತ ದೂರು ನೀಡಿದ್ದು, ಇದಕ್ಕೆ ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ. ಸರ್ಕಾರ ಕೂಡಲೇ ಸಚಿವರ ರಾಜೀನಾಮೆ ಪಡೆದು, ಸಮಗ್ರ ತನಿಖೆಗೆ ಆದೇಶಿಸಬೇಕು ಎಂದು ಒತ್ತಾಯಿಸಿದ್ದಾರೆ.

<><*<><>*><>

ಕೇಂದ್ರ ಸರ್ಕಾರ ಜಿ ರಾಮ್ ಜಿ ಯೋಜನೆ ಮೂಲಕ ಮಹಾತ್ಮಗಾಂಧೀಜಿಯವರಿಗೆ ಅವಮಾನ ಮಾಡಲು ಮುಂದಾಗಿದೆ ಎಂದು ರಾಜ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮಪಂಚಾಯತ್‌ಗಳ ಅಧಿಕಾರದ ಹಕ್ಕನ್ನೇ ಮೊಟಕುಗೊಳಿಸಲು ಮುಂದಾಗಿದೆ ಎಂದು ದೂರಿದ್ದಾರೆ. ಕೇಂದ್ರದ ಹೊಸ ನೀತಿಯ ಪ್ರಕಾರ ಗ್ರಾಮಪಂಚಾಯತ್ ಗಳು ಯಾವುದೇ ಅಭಿವದ್ಧಿ ಕಾರ್ಯ ಕೈಗೊಳ್ಳಬೇಕಾದರೂ ಕೇಂದ್ರದ ಅನುಮತಿ ಪಡೆಯಬೇಕಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಗದಗ ಜಿಲ್ಲೆಯ ಲಕ್ಕುಂಡಿಯ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ಇಂದು ಐದನೆಯ ದಿನಕ್ಕೆ ಕಾಲಿಟ್ಟಿದೆ. ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ೩೫ ಕಾರ್ಮಿಕರಿಂದ ಮುಂದುವರೆದ ಉತ್ಖನನ ಕಾರ್ಯದಲ್ಲಿ ಇಂದು ಪುರಾತನ ಕಾಲದ ಮಡಿಕೆಯ ಚೂರುಗಳು ಮತ್ತು ಲೋಹದ ಗಂಟೆ ಪತ್ತೆಯಾಗಿದೆ.  ಈವರೆಗೆ ಐದು ಅಡಿಗಳಷ್ಟು ಉತ್ಖನನ ಮಾಡಲಾಗಿದೆ ಎಂದು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರ ತಿಳಿಸಿದೆ. ಕಲ್ಯಾಣ ಚಾಲುಕ್ಯರ ಆಡಳಿತದಲ್ಲಿ ಲಕ್ಕುಂಡಿ ಗ್ರಾಮದಲ್ಲಿ ಹಲವಾರು ದೇವಸ್ಥಾನಗಳು ಮತ್ತು ಕಲ್ಯಾಣಿಗಳನ್ನು ನಿರ್ಮಾಣ ಮಾಡಲಾಗಿತ್ತು ಎಂದು ಇತಿಹಾಸ ತಜ್ಞರು ಮತ್ತು ಸಂಶೋಧಕರು ತಿಳಿಸಿದ್ದಾರೆ. ಭೂ ಗರ್ಭದಲ್ಲಿ ಹುದುಗಿರುವ ಐತಿಹಾಸಿಕ ಪ್ರಸಿದ್ಧ ಶಿಲ್ಪ ಕಲೆಯನ್ನು ಒಳಗೊಂಡ ದೇವಸ್ಥಾನಗಳನ್ನು ಮತ್ತು ಕಲ್ಯಾಣಿಗಳನ್ನು ಹೊರ ಜಗತ್ತಿಗೆ ಪರಿಚಯಿಸುವುದರ ಜೊತೆಗೆ ಪ್ರಾಚೀನ ಸ್ಮಾರಕಗಳನ್ನು ಸಂರಕ್ಷಿಸುವ ಉದ್ದೇಶದಿಂದ ಲಕ್ಕುಂಡಿ ಗ್ರಾಮದ ಪರಿಸರದಲ್ಲಿ ಉತ್ಖನನ ಪ್ರಾರಂಭಿಸಲಾಗಿದೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಬೆಂಗಳೂರಿನ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ನಡೆದ ದಕ್ಷಿಣ ಭಾರತ ಸಮಾಜವಾದಿ ಸಮ್ಮೇಳನವನ್ನು ಉದ್ಘಾಟಿಸಿದರು. ಸಮಾಜವಾದಿ ಅಧ್ಯಯನ ಕೇಂದ್ರ ಮತ್ತು ಸಮಾಜವಾದಿ ಸಮಾಗಮ ಸಂಸ್ಥೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಅಧ್ಯಕ್ಷತೆ ವಹಿಸಿದ್ದರು.  ರಾಜ್ಯ ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್.ಪಾಟೀಲ್, ಹಿರಿಯ ಸಮಾಜವಾದಿ ಚಿಂತಕ ಜಿ.ವಿ.ಸುಂದರ್, ಮಾಜಿ ಸಂಸದ ಥಪನ್ ಥಾಮಸ್, ಶಾಸಕರಾದ ತಮಿಳುನಾಡಿನ ರಾಜೇಶ್ ಕುಮಾರ್, ಸೇರಿ ಹಲವು ಮುಖಂಡರು ಉಪಸ್ಥಿತರಿದ್ದರು.

<><*<><>*><>

ನಾಳೆ ತುಮಕೂರಿನಲ್ಲಿ ಶಿವಕುಮಾರ ಸ್ವಾಮೀಜಿಗಳ ಏಳನೇ ವರ್ಷದ ಪುಣ್ಯ ಸಂಸ್ಮರಣೋತ್ಸೋವ ನಡೆಯಲಿದೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ನಾಳೆ ಅವರು ಮೊದಲ ಶಿವಕುಮಾರ ಶ್ರೀಗಳ ಗದ್ದುಗೆಗೆ ಪೂಜೆ ಸಲ್ಲಿಸಲಿದ್ದಾರೆ. ಬಳಿಕ ಗೋಸಲ ಸಿದ್ದೇಶ್ವರ ವೇದಿಕೆಯಲ್ಲಿ ನಡೆಯಲಿರುವ ಸಭಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವ ವಿ.ಸೋಮಣ್ಣ ಅವರು ಪಾಲ್ಗೊಳ್ಳಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಸಿದ್ದಗಂಗಾ ಮಠದ ಬಳಿ ಬಿಗಿಬಂದೋಬಸ್ತ್ ಏರ್ಪಡಿಸಲಾಗಿದೆ.

<><*<><>*><>

ತುಮಕೂರಿನಲ್ಲಿ ನಡೆಯುತ್ತಿರುವ ಕರ್ನಾಟಕ ಕ್ರೀಡಾಕೂಟದ ವೇಟ್ ಲಿಫ್ಟಿಂಗ್ ಸ್ಪರ್ಧೆಯ ಮಹಿಳೆಯರ ೬೯ ಕೆಜಿ ವಿಭಾಗದಲ್ಲಿ ದಕ್ಷಿಣ ಕನ್ನಡದ ಸೀಮ ಜಯಕಾಂತ್ ಸ್ವರ್ಣ ಪದಕ ಗೆದ್ದಿದ್ದಾರೆ. ಡಾ.ಜಿ.ಪರಮೇಶ್ವರ್ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಸ್ಪರ್ಧೆಯಲ್ಲಿ ಬೆಂಗಳೂರು ನಗರದ ಅಮೂಲ್ಯ ಆರ್. ರಾವ್ ಬೆಳ್ಳಿ ಹಾಗೂ ದಕ್ಷಿಣ ಕನ್ನಡದ ಮಲ್ಲಮ್ಮ ಕಣಬೂರ್ ಕಂಚಿನ ಪದಕ ಪಡೆದಿದ್ದಾರೆ. ಮಹಿಳೆಯರ ೭೭ ಕೆಜಿ ವಿಭಾಗದಲ್ಲಿ ದಕ್ಷಿಣ ಕನ್ನಡದ ಮಾನಸ ಎಸ್., ವಿತಶ್ರೀ ವಿ. ಗೌಡ ಮತ್ತು ಸ್ಫೂರ್ತಿ ಟಿ.ಜೆ. ಕ್ರಮವಾಗಿ ಮೊದಲ ಮೂರು ಸ್ಥಾನ ಪಡೆದಿದ್ದಾರೆ.

<><*<><>*><>

ಹಾವೇರಿಯಲ್ಲಿ ಫೆಬ್ರವರಿ ೧೩ ರಂದು ನಡೆಯಲಿರುವ ರಾಜ್ಯ ಸರ್ಕಾರದ ಸಾಧನಾ ಸಮಾವೇಶದಲ್ಲಿ ೧ ಲಕ್ಷ ಜನರಿಗೆ ಹಕ್ಕುಪತ್ರ ನೀಡಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಮಾತನಾಡಿದ ಅವರು, ರಾಜ್ಯ ಸರ್ಕಾರ ಎರಡು ವರ್ಷ ಅವಧಿಯಲ್ಲಿ ೧ ಲಕ್ಷದ ೧೧ ಸಾವಿರ ಮಂದಿಗೆ ಹಕ್ಕು ಪತ್ರ ನೀಡಿದೆ. ಹಾವೇರಿ ಜಿಲ್ಲೆಯಲ್ಲಿಯೂ ೨೮ ಸಾವಿರ ಜನರಿಗೆ ಹಕ್ಕುಪತ್ರ ನೀಡಲಾಗಿದೆ.

ಅರ್ಹರನ್ನು ಗುರುತಿಸಿ ಹಕ್ಕುಪತ್ರ ವಿತರಿಸಲಾಗುತ್ತಿದ್ದು, ಹಾಡಿ, ಹಟ್ಟಿ, ತಾಂಡಾಗಳಲ್ಲಿ ದಾಖಲೆ ರಹಿತವಾಗಿ ವಾಸಿಸುತ್ತಿದ್ದ ಜನರಿಗೆ ನೆಮ್ಮದಿ ಬದುಕು ನಡೆಸಲು ಹಕ್ಕುಪತ್ರ ನೀಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ರಾಮನಗರದಲ್ಲಿ ಮಾಧ್ಯಮ ವೃತ್ತಿಪರರಿಗೆ ಆತ್ಮಹತ್ಯೆ ವರದಿ ಮಾಡುವ ಕುರಿತು ಹಾಗೂ ಮಾರ್ಗದರ್ಶನ ಮತ್ತು ಸುಧಾರಣೆ ಕಾರ್ಯಕ್ರಮವನ್ನು ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿಂದು ನಿಮ್ಹಾನ್ಸ್ ವತಿಯಿಂದ ಅಯೋಜಿಸಲಾಗಿತ್ತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**